# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **655**

ಸದಸ್ಯರ ಹೆಸರು : ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥ9ಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 12-03-2020

ಉತ್ತರಿಸುವ ಸಚಿವರು : ಮುಖ್ಯಮಂತ್ರಿಗಳು

***

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ಜಾಲಹಳ್ಳಿಯಲ್ಲಿರುವ 33 ಕೆ.ವಿ. ಸ್ಟೇಷನ್‌ಗೆ ಪ್ರವಾಹ ಸಮಯದಲ್ಲಿ ನೀರು ಸೇರಿ ಸಾಕಷ್ಟು ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ಸುತ್ತಮುತ್ತ ಹಳ್ಳಿಗಳಲ್ಲಿ ಕೆಲವು ದಿವಸಗಳವರೆಗೆ ವಿದ್ಯುತ್ ಸಂಪರ್ಕವಿಲ್ಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಪರ್ಯಾಯ ಕ್ರಮ ಯಾವುದು; | ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ಜಾಲಹಳ್ಳಿಯಲ್ಲಿರುವ 33/11 ಕೆ.ವಿ., ಸ್ಟೇಷನ್‌ಗೆ ಪ್ರವಾಹ ಸಮಯದಲ್ಲಿ ನೀರು ಸೇರಿ ಹಾನಿಯಾಗಿರುವುದು ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯ ಗಮನಕ್ಕೆ ಬಂದಿರುತ್ತದೆ.<br><br>ಇದರಿಂದ ಜಾಲಹಳ್ಳಿ ಹಾಗೂ ಸುತ್ತಮುತ್ತಲಿನ ಹಳ್ಳಿಗಳಿಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿರುವುದು ಗಮನಕ್ಕೆ ಬಂದಿರುತ್ತದೆ. ಆದ್ದರಿಂದ, ಬದಲಿ ವ್ಯವಸ್ಥೆಯಾಗಿ ಜಾಲಹಳ್ಳಿ ಹಾಗೂ ಸುತ್ತ-ಮುತ್ತಲಿನ ಗ್ರಾಮಗಳಿಗೆ ಹತ್ತಿರದ 33/11 ಕೆವಿ ಗಾಣದಳ ವಿದ್ಯುತ್ ಉಪ ಕೇಂದ್ರದಿಂದ ವಿದ್ಯುತ್ ಸರಬರಾಜು ಮಾಡಲಾಗಿರುತ್ತದೆ. |
| ಆ) | ಪ್ರವಾಹ ಬಂದಾಗ ಸ್ಟೇಷನ್‌ನಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಜೀವನ್ಮರಣದೊಡನೆ ಕೆಲಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು; | ಪ್ರವಾಹ ಬಂದಾಗ ವಿದ್ಯುತ್ ಉಪ-ಕೇಂದ್ರದಲ್ಲಿನ ಉಪಕರಣಗಳು ಮತ್ತು ಸಿಬ್ಬಂದಿಗಳ ಸುರಕ್ಷತೆಗಾಗಿ ಜಾಲಹಳ್ಳಿಯ 33/11 ಕೆ.ವಿ. ವಿದ್ಯುತ್ ಉಪಕೇಂದ್ರವನ್ನು ಸ್ಥಗಿತಗೊಳಿಸಲಾಗಿರುತ್ತದೆ. |
| ಇ) | ಪ್ರವಾಹ ಬಂದಾಗ 33 ಕೆ.ವಿ. ಸ್ಟೇಷನ್‌ಗೆ ನೀರು ಬರದಂತೆ ಸರ್ಕಾರ ಕೈಗೊಂಡ ಕ್ರಮವೇನು; | ಸದರಿ ವಿದ್ಯುತ್ ಉಪಕೇಂದ್ರಕ್ಕೆ ಪ್ರವಾಹ ಬಂದಾಗ ನೀರು ಬರದಂತೆ ತಡೆಗಟ್ಟಲು, ಕಾಂಪೌಂಡ್ /ತಡೆಗೋಡೆಯ ನಿರ್ಮಾಣ ಕಾರ್ಯವನ್ನು ರೂ. 22.00 ಲಕ್ಷ ವೆಚ್ಚದಲ್ಲಿ ಕೈಗೊಳ್ಳಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿವೆ. |

....2

| | | |
|---|---|---|
| ಈ) | 33 ಕೆ.ವಿ. ಸ್ಟೇಷನ್‌ನನ್ನು ಬೇರೆಡೆಗೆ ಸ್ಥಳಾಂತರ ಮಾಡಲು ಸರ್ಕಾರದ ಮುಂದೆ ಯೋಜನೆಗಳಿದೆಯೇ? | ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ತಾಂತ್ರಿಕ ಸಮನ್ವಯ ಸಮಿತಿ ಸಭೆಯಲ್ಲಿ 33/11 ಕೆ.ವಿ., ಜಾಲಹಳ್ಳಿ ಉಪಕೇಂದ್ರವನ್ನು 110/11 ಕೆ.ವಿ.ಗೆ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯು ಅನುಮೋದನೆಗೊಂಡಿದ್ದು, ಜಾಲಹಳ್ಳಿಯಲ್ಲಿಯೇ ಸ್ಥಳ ಗುರುತಿಸಲಾಗಿದೆ ಮತ್ತು ಭೂಸ್ವಾದೀನ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ಪ್ರಸ್ತುತ ಜಾಲಹಳ್ಳಿಯಲ್ಲಿರುವ 33/11 ಕೆ.ವಿ ಉಪಕೇಂದ್ರವು ಹೊಸದಾಗಿ ಗುರುತಿಸಲಾಗುತ್ತಿರುವ ಸ್ಥಳಕ್ಕೆ ಸ್ಥಳಾಂತರಗೊಂಡು, 110/11 ಕೆ.ವಿ. ಉಪಕೇಂದ್ರವಾಗಿ ಉನ್ನತೀಕರಣಗೊಳ್ಳಲಿದೆ. ಸದರಿ ಉಪಕೇಂದ್ರವು ಚಾಲನೆಗೊಂಡ ನಂತರ ಜಾಲಹಳ್ಳಿ ಹಾಗೂ ಅದರ ಸುತ್ತ-ಮುತ್ತಲಿನ ಗ್ರಾಮಗಳಿಗೆ ಉತ್ತಮ ಗುಣಮಟ್ಟದ ವಿದ್ಯುತ್ತನ್ನು ಸರಬರಾಜು ಮಾಡಬಹುದಾಗಿರುತ್ತದೆ. |

ಸಂಖ್ಯೆ: ಎನರ್ಜಿ 53 ಇಬಿಎಸ್ 2020

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್.ಯಡಿಯೂರಪ್ಪ)

ಮುಖ್ಯಮಂತ್ರಿ